ಅ) ಕಲಘಟಗಿ ತಾಲ್ಲೂಕ್ ಬಮ್ಮಿಗಟ್ಟಿ ಗ್ರಾಮದಲ್ಲಿ ಸರ್ಕಾರಿ ಪ್ರೌಢಶಾಲೆ ಇರುವುದು ನಿಜವೇ

ಆ) ಆ ಗ್ರಾಮದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು ತೆರೆಯುವ ಬಗ್ಗೆ ಪ್ರಸ್ತಾವನೆಗಳು ಸರ್ಕಾರದ ಮುಂದೆ ಇದೆಯೇ?

ಇ) ಹಾಗಿದ್ದಲ್ಲಿ 1994-95ನೇ ಸಾಲಿನಲ್ಲಿ ಸರ್ಕಾರವು ಪದವಿ ಪೂರ್ವ ಕಾಲೇಜನ್ನು ಪ್ರಾರಂಭಿಸಲು ಸರ್ಕಾರ ಅನುಮತಿ ನೀಡುತ್ತದೆಯೇ?

ಶ್ರೀಮತಿ ನಾಗಮ್ಮ ಸಿ. ಕೇಶವ ಮೂರ್ತಿ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) ನಿಜ

ಆ) ಇಲ್ಲ

ಇ) ಪ್ರಸ್ತಾವನೆ ಬಂದಲ್ಲಿ ಪರಿಶೀಲಿಸಿ ಕ್ರಮ ತೆಗೆದುಕೊಳ್ಳಲಾಗುವುದು.

ಕಲಘಟಗಿ ಮತ್ತು ಹುಬ್ಬಳ್ಳಿ ತಾಲ್ಲೂಕುಗಳಲ್ಲಿ ಸರ್ಕಾರಿ ಪದವಿಪೂರ್ವ ಕಾಲೇಜುಗಳನ್ನು ತೆರೆಯುವುದು

472 - ಶ್ರೀ ಪಿ.ಸಿ. ಸಿದ್ದನಗೌಡರ್ (ಕಲಘಟಕಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಲಘಟಗಿ ತಾಲ್ಲೂಕ್ ಸೂರಶೆಟ್ಟಿ ಕೊಪ್ಪಗ್ರಾಮ ಹಾಗೂ ಹುಬ್ಬಳ್ಳಿ ತಾಲ್ಲೂಕಿನ ವಿಶ್ವೇಶ್ವರಯ್ಯ ನಗರದಲ್ಲಿ ಹೊಸದಾಗಿ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ

ಆ) ಹಾಗಿದ್ದಲ್ಲಿ 1994-95ರಲ್ಲಿ ಆ ಸ್ಥಳಗಳಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ತೆರೆಯಲಾಗುವುದೇ?

ಶ್ರೀಮತಿ ನಾಗಮ್ಮ ಸಿ. ಕೇಶವಮೂರ್ತಿ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) ಕಲಘಟಗಿ ತಾಲ್ಲೂಕು ಸೂರಶೆಟ್ಟಿ ಕೊಪ್ಪ ಸರ್ಕಾರಿ ಪ್ರೌಢಶಾಲೆಯಲ್ಲಿ ಪದವಿ ಪೂರ್ವ ಕಾಲೇಜು ಪ್ರಾರಂಭಿಸುವ ಬಗ್ಗೆ ಪ್ರಸ್ತಾವನೆ ಬಂದಿದೆ. ಆದರೆ ವಿಶ್ವೇಶ್ವರಯ್ಯ ನಗರದಲ್ಲಿ ಹೊಸದಾಗಿ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾರಂಭಿಸುವ ಬಗ್ಗೆ ಪ್ರಸ್ತಾವನೆ ಬಂದಿರುವುದಿಲ್ಲ.

ಆ) ಸೂರಶೆಟ್ಟಿ ಕೊಪ್ಪಗ್ರಾಮದಲ್ಲಿ ಪದವಿಪೂರ್ವ ಕಾಲೇಜನ್ನು ಪ್ರಾರಂಭಿಸುವ ಪ್ರಸ್ತಾವನೆಯನ್ನು ತಿರಸ್ಕರಿಸಲಾಗಿದೆ. ಹುಬ್ಬಳ್ಳಿ ತಾಲ್ಲೂಕಿನ ವಿಶ್ವೇಶ್ವರಯ್ಯ ನಗರದಲ್ಲಿ ಹೊಸದಾಗಿ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಪ್ರಾರಂಭಿಸುವ ಬಗ್ಗೆ ಪ್ರಸ್ತಾವನೆ ಬಂದಲ್ಲಿ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ಬಸಾಪೂರ ಜೂನಿಯರ್ ಕಾಲೇಜಿನ ಮಂಜೂರಿ ಮತ್ತು ಕೆಲಸದ ಬಗ್ಗೆ

474 - ಶ್ರೀ ಉಮೇಶ್ ವಿ. ಕತ್ತಿ (ಹುಕ್ಕೇರಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸಾಪೂರ ಜೂನಿಯರ್ ಕಾಲೇಜು ಪ್ರಾರಂಭಿಸುವ ಸಲುವಾಗಿ ಸರ್ಕಾರದ ಕ್ರಮವೇನು?

ಆ) ಬಹುದಿನಗಳ ಬೇಡಿಕೆಯಾದ ಆ ಕಾಲೇಜನ್ನು ಪ್ರಾರಂಭಿಸಲಾಗುವುದೇ

ಇ) ಹಾಗಿದ್ದಲ್ಲಿ ಅದಕ್ಕೆ ಯಾವಾಗ ಮಂಜೂರಿ ಕೊಡುವುದು ಮತ್ತು ಆ ಬಗ್ಗೆ ಪ್ರಸ್ತಾವನೆ ಸರ್ಕಾರಕ್ಕೆ ಬಂದಿದೆಯೇ

ಈ) ಬಂದಿದ್ದಲ್ಲಿ ಯಾವಾಗ ಕೆಲಸ ಪ್ರಾರಂಭಿಸಲಾಗುವುದು?

ಶ್ರೀಮತಿ ನಾಗಮ್ಮ ಸಿ. ಕೇಶವ ಮೂರ್ತಿ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ)ಬಸಾಪುರದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಪ್ರಾರಂಭಿಸುವ ಪ್ರಸ್ತಾವನೆಯನ್ನು 1994-95ನೇ ಸಾಲಿನಲ್ಲಿ ಪರಿಗಣಿಸಲಾಗಿಲ್ಲ.

ಆ) ಪರಿಶೀಲಿಸಿ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

ಇ) ಬಂದಿದೆ

ಈ) 'ಆ' ನಲ್ಲಿನ ಉತ್ತರ ಅನ್ವಯಿಸುವುದು

ಶ್ರೀ ಬಸವರಾಜ ರಾಯರೆಡ್ಡಿ : ಮಾನ್ಯ ಅಧ್ಯಕ್ಷರೇ.....

ಅಧ್ಯಕ್ಷರು : ಈಗ ಸಭೆಯ ಮುಂದಿಡುವ ಕಾಗದ ಪತ್ರಗಳು ರಾಯರೆಡ್ಡಿ ಅವರೇ, ತಾವು ಕುಳಿತುಕೊಳ್ಳಿ.

ಶ್ರೀ ಬಿ.ಎಂ. ಕಾನಡೆ : ಅವರು ಸಸ್ಪೆಂಡ್ ಆಗಿದ್ದಾರೆ. ಅವರನ್ನು ಹೊರಗಡೆ ಹಾಕಬೇಕು.

(ಗೊಂದಲ)

ಅಧ್ಯಕ್ಷರು : ತಾವು ಸಭೆಯ ಕಾರ್ಯಕಲಾಪಗಳನ್ನು ಅರ್ಥಮಾಡಿಕೊಳ್ಳಬೇಕು. ಸಭೆಯ ಮುಂದೆ ಕಾಗದಗಳ ಮಂಡನೆ ಆಗಲಿ.

ಶ್ರೀ ಬಸವರಾಜ ರಾಯರೆಡ್ಡಿ : ಇವತ್ತು ನ್ಯಾಯಾಂಗ ತನಿಖೆ ಆಗಬೇಕು. ಗೋಲೀಬಾರ್ ನಿಂದ 7 ಜನ ಸತ್ತಿದ್ದಾರೆ. ಮತ್ತು 3 ಜನರ ಕೊಲೆ ಆಗಿದೆ.

ಅಧ್ಯಕ್ಷರು : ತಾವು ಏನು ಮಾತನಾಡಿದರೂ ಅದು ರೆಕಾರ್ಡ್‌ಗೆ ಹೋಗುವುದಿಲ್ಲ.

(ಅಧ್ಯಕ್ಷರ ಆಜ್ಞೆ ಮೇರೆಗೆ ಮಾನ್ಯ ಸದಸ್ಯರು ಹೇಳಿದ್ದನ್ನು ರೆಕಾರ್ಡ್ ಮಾಡಲಿಲ್ಲ)

ಅಧ್ಯಕ್ಷರು : ಈಗ ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು.

3. ಸಭೆಯ ಮುಂದಿಡಲಾದ ಕಾಗದ ಪತ್ರಗಳು.

I. ಶ್ರೀ ಎಂ. ವೀರಪ್ಪಮೊಯಿಲಿ (ಮುಖ್ಯಮಂತ್ರಿ) : ಮಾನ್ಯ ಅಧ್ಯಕ್ಷರೆ,

1965ನೇ ಇಸವಿಯ ಕರ್ನಾಟಕ ಅಬಕಾರಿ ಅಧಿನಿಯಮ 71 (4) ನೇ ಕಲಮಿನ ಮೇರೆಗೆ,

1. 1967ನೇ ಇಸವಿಯ ಕರ್ನಾಟಕ ಅಬಕಾರಿ ಪರವಾನಗಿಗಳ (ಸಾಮಾನ್ಯ ಷರತ್ತುಗಳು) ನಿಯಮಗಳ ತಿದ್ದುಪಡಿಗೆ ಸಂಬಂಧಿಸಿದಂತೆ ದಿನಾಂಕ 6-12-93 ರಂದು ಹೊರಡಿಸಲಾದ ಎಫ್ ಡಿ 20 ಪಿ.ಇ.ಎಸ್ 92 ನೇ ಕ್ರಮಾಂಕದ ಅಧಿಸೂಚನೆ.

1964 ನೇ ಸಾಲಿನ ಕರ್ನಾಟಕ ಸಿನಿಮಾ (ನಿಯಂತ್ರಣ) ಅಧಿನಿಯಮದ 22ನೇ ಕಲಮಿನ ಮೇರೆಗೆ

2. ಧಾರವಾಡ ಜಿಲ್ಲೆ ಹಿರೇಕೆರೂರಿನ ಶ್ರೀ ಕುಮಾರೇಶ್ವರ ಸಂಚಾರಿ ಚಿತ್ರಮಂದಿರವನ್ನು ಅರೆ ಖಾಯಂ ಚಿತ್ರಮಂದಿರವನ್ನಾಗಿ ಪರಿವರ್ತಿಸುವ ಸಂಬಂಧದಲ್ಲಿ ದಿನಾಂಕ 30-12-93ರಂದು ಹೊರಡಿಸಲಾದ ಹೆಚ್‌ಡಿ 197 ಸಿಎನ್‌ಎ 93 ನೇ ಕ್ರಮಾಂಕದ ಅಧಿಸೂಚನೆ.